ಸಂಖ್ಯೆ:ಸಿಇ 176 ಸಿಎಲ್ಎಂ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 08-01-2016.

## ಅಧಿಸೂಚನೆ

ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ (2000ದ ಕರ್ನಾಟಕ ಅಧಿನಿಯಮ ಸಂಖ್ಯೆ 17) ಪ್ರಕರಣ 3ರ ಉಪಪ್ರಕರಣ (3)ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಅಧಿಸೂಚನೆ ಸಂಖ್ಯೆ:ಸಿಇ 220 ಸಿಎಲ್ಎಂ 2005 ದಿನಾಂಕ:22-08-2005 ಹಾಗೂ ಸಂಖ್ಯೆ: ಸಿಇ 295 ಸಿಎಲ್ಎಂ 2005, ದಿನಾಂಕ:21-08-2006 ಅನ್ನು ರದ್ದುಪಡಿಸಿ ಮತ್ತು ಅಧಿಸೂಚನೆ ಸಂಖ್ಯೆ:ಸಿಇ 355 ಸಿಎಲ್ಎಂ 2005 ದಿನಾಂಕ:12-04-2006 ಅನ್ನು ಭಾಗಶಃ ಮಾರ್ಪಡಿಸಿ ಕರ್ನಾಟಕ ಸರ್ಕಾರವು ಈ ಮೂಲಕ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ, 1997ರ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು, 2004ರ ಉಪಬಂಧಗಳಡಿಯಲ್ಲಿ ಸಹಕಾರಿಗಳ ರಿಜಿಸ್ಟ್ರಾರನಿಗೆ ಪ್ರದತ್ತವಾದ ಅಧಿಕಾರಗಳನ್ನು ಈ ಕೆಳಕಂಡ ಕೋಷ್ಟಕದ ಅಂಕಣ (4)ರಲ್ಲಿ ನಿರ್ದಿಷ್ಟಪಡಿಸಿರುವ ಅಧಿಕಾರಿಗಳನ್ನು ಅಂಕಣ (2)ರಲ್ಲಿ ನಿರ್ದಿಷ್ಟ ಪಡಿಸಿರುವ ಅಧಿಕಾರಿಗಳಿಗೆ ಕ್ರಮವಾಗಿ ಅಂಕಣ (3) ರಲ್ಲಿ ನಿರ್ದಿಷ್ಟಪಡಿಸಿರುವ ಸಹಕಾರಿಗಳ ಕಾರ್ಯವ್ಯಾಪ್ತಿಗೆ ಒಳಪಟ್ಟು ಪ್ರಧಾನ ಮಾಡಿದೆ, ಅಂದರೆ;

| ಕ್ರಮ ಸಂಖ್ಯೆ | ಅಧಿಕಾರಿಗಳು | ಸಹಕಾರಿಗಳು | ಪ್ರಧಾನ ಮಾಡಲಾದ ಅಧಿಕಾರಗಳು |
|---|---|---|---|
| 01 | 02 | 03 | 04 |
| 01 | ಉಪ ವಿಭಾಗಗಳ ಸಹಕಾರಿಗಳ ಸಹಾಯಕ ರಿಜಿಸ್ಟ್ರಾರ್‌ಗಳು (ಬೆಂಗಳೂರು ನಗರ ಜಿಲ್ಲೆಗಳ ಸಹಕಾರಿಗಳ ಸಹಾಯಕ ರಿಜಿಸ್ಟ್ರಾರ್‌ಗಳನ್ನು ಹೊರತುಪಡಿಸಿ) | ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯ ವ್ಯಾಪ್ತಿಯ ಎಲ್ಲಾ ಸಹಕಾರಿಗಳು. | **ಪ್ರಕರಣಗಳು:** 35, 47, 48 ಮತ್ತು 51<br>**ನಿಯಮ:** 3, 7(1) ಮತ್ತು 29 |
| 02 | ಬೆಂಗಳೂರು ನಗರ ಜಿಲ್ಲೆಗಳ ಉಪವಿಭಾಗಗಳ ಸಹಕಾರಿಗಳ ಸಹಾಯಕ ರಿಜಿಸ್ಟ್ರಾರ್‌ಗಳು. | ಸಹಕಾರಿಗಳ ಸಹಾಯಕ ರಿಜಿಸ್ಟ್ರಾರ್‌ಗಳ ವ್ಯಾಪ್ತಿಯಲ್ಲಿ ನೋಂದಾಯಿತ ಕಛೇರಿ ಹೊಂದಿರುವ ಮತ್ತು ತಾಲ್ಲೂಕು ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿ ಹೊಂದಿರುವ ಎಲ್ಲಾ ಸಹಕಾರಿಗಳು | **ಪ್ರಕರಣಗಳು:** 35, 47, 48 ಮತ್ತು 51<br>**ನಿಯಮ:** 3, 7(1) ಮತ್ತು 29 |
| 03 | ಜಿಲ್ಲಾ ಸಹಕಾರಿಗಳ ಉಪ ರಿಜಿಸ್ಟ್ರಾರ್‌ಗಳು (ಬೆಂಗಳೂರು ನಗರ ಜಿಲ್ಲೆಗಳ ಸಹಕಾರಿಗಳ ಉಪ ರಿಜಿಸ್ಟ್ರಾರ್‌ಗಳನ್ನು ಹೊರತುಪಡಿಸಿ) | ತಾಲ್ಲೂಕು ಮಟ್ಟದ ಕಾರ್ಯವ್ಯಾಪ್ತಿ ಮತ್ತು ಜಿಲ್ಲಾ ಮಟ್ಟಕ್ಕಿಂತ ಕಡಿಮೆ ಕಾರ್ಯ ವ್ಯಾಪ್ತಿಯ ಎಲ್ಲಾ ಸಹಕಾರಿಗಳು | **ಪ್ರಕರಣಗಳು:** 35, 47, 48 ಮತ್ತು 51<br>**ನಿಯಮ:** 3, 7(1) ಮತ್ತು 29 |
| 04 | ಬೆಂಗಳೂರು ನಗರ ಜಿಲ್ಲೆಗಳ ಸಹಕಾರಿಗಳ ಉಪ ರಿಜಿಸ್ಟ್ರಾರ್‌ಗಳು. | ಸಹಕಾರಿಗಳ ಉಪ ರಿಜಿಸ್ಟ್ರಾರ್‌ಗಳ ಕಾರ್ಯ ವ್ಯಾಪ್ತಿಯಲ್ಲಿ ನೋಂದಾಯಿತ ಕಛೇರಿ ಹೊಂದಿರುವ ಮತ್ತು ತಾಲ್ಲೂಕು ಮಟ್ಟದ ಕಾರ್ಯವ್ಯಾಪ್ತಿ ಮತ್ತು ಜಿಲ್ಲಾ ಮಟ್ಟಕ್ಕಿಂತ ಕಡಿಮೆ ಕಾರ್ಯವ್ಯಾಪ್ತಿಯ ಎಲ್ಲಾ ಸಹಕಾರಿಗಳು. | **ಪ್ರಕರಣಗಳು:** 35, 47, 48 ಮತ್ತು 51<br>**ನಿಯಮ:** 3, 7(1) ಮತ್ತು 29 |

| | | | |
|---|---|---|---|
| 05 | ಪ್ರಾಂತೀಯ ಸಹಕಾರಿಗಳ ಜಂಟಿ ರಿಜಿಸ್ಟ್ರಾರ್‌ಗಳು | ಜಿಲ್ಲಾ ಮಟ್ಟದ ಕಾರ್ಯವ್ಯಾಪ್ತಿ ಮತ್ತು ವಿಭಾಗೀಯ ಮಟ್ಟದ ಕಾರ್ಯವ್ಯಾಪ್ತಿ ಮೀರದ ಎಲ್ಲಾ ಸಹಕಾರಿಗಳು. | **ಪ್ರಕರಣಗಳು:** 35, 47, 48 ಮತ್ತು 51<br><br>**ನಿಯಮ:** 3, 7(1) ಮತ್ತು 29 |
| 06 | ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, ಬೆಂಗಳೂರು ಇದಕ್ಕೆ ಕರ್ನಾಟಕ ನಾಗರಿಕ ಸೇವಾ ನಿಯಮ-441 ರ ಪ್ರಕಾರ ನೇಮಕ ಹೊಂದಿದ ಸಹಕಾರ ಸಂಘಗಳ ಜಂಟಿ ರಿಜಿಸ್ಟ್ರಾರ್ | ಎಲ್ಲಾ ಕಾರ್ಯ ವ್ಯಾಪ್ತಿಯ ಎಲ್ಲಾ ಸಹಕಾರಿಗಳು. | **ಪ್ರಕರಣಗಳು:** 37ಎ, 39, 40, 41 (41ರ ಉಪ ಪ್ರಕರಣ (1) (ಬಿ) ಮತ್ತು (ಸಿ) ಹೊರತುಪಡಿಸಿ) 44 ಮತ್ತು 45<br><br>**ನಿಯಮ:** 11, 27 ಮತ್ತು 29 |
| 07 | ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, ಬೆಂಗಳೂರು ಇದಕ್ಕೆ ಕರ್ನಾಟಕ ನಾಗರಿಕ ಸೇವಾ ನಿಯಮ-441 ರ ಪ್ರಕಾರ ನೇಮಕ ಹೊಂದಿದ ಸಹಕಾರ ಸಂಘಗಳ ಸಹಾಯಕ ರಿಜಿಸ್ಟ್ರಾರ್ | ಎಲ್ಲಾ ಕಾರ್ಯ ವ್ಯಾಪ್ತಿಯ ಎಲ್ಲಾ ಸಹಕಾರಿಗಳು. | **ಪ್ರಕರಣಗಳು:** 43<br><br>**ನಿಯಮ :** 13, 14, 16, 17, 18,19 ಮತ್ತು 29 |

ನಿಯಮ 441 ರಡಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಇದಕ್ಕೆ ನೇಮಕ ಹೊಂದಿದ ಅಧಿಕಾರಿಗಳು ತಮ್ಮ ಕಾರ್ಯ ವ್ಯಾಪ್ತಿಯ ಯಾವುದೇ ಸ್ಥಳದಲ್ಲಿ ಅಗತ್ಯಕ್ಕೆ ತಕ್ಕಂತೆ ಉಪವೇಶನಗಳನ್ನು ನಡೆಸಿ ಕಾರ್ಯ ನಿರ್ವಹಿಸಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ವೆಂಕಟಸ್ವಾಮಿ)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಸಹಕಾರ ಇಲಾಖೆ.
ದೂರವಾಣಿ ಸಂಖ್ಯೆ 080-22032368.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಲಾಗಿದೆ. ಮತ್ತು ಅದರ 50 ಪ್ರತಿಗಳನ್ನು ಸಹಕಾರ ಇಲಾಖೆಗೆ ಕೂಡಲೇ ಕಳುಹಿಸಿಕೊಡಲು ಕೋರಲಾಗಿದೆ.

**ಪ್ರತಿಗಳು:**

1) ಸಹಕಾರ ಸಂಘಗಳ ನಿಬಂಧಕರು, ನಂ. 1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52.
2) ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ. 17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು-04
3) ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು.
4) ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಂಯುಕ್ತ ಸಹಕಾರಿ ನಿಯಮಿತ, ನಿರ್ಮಾಣ ಭವನ, ಡಾ:ರಾಜಕುಮಾರ್ ರಸ್ತೆ, 1ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು-10
5) ಮಾನ್ಯ ಸಹಕಾರ ಹಾಗೂ ಸಕ್ಕರೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ.
7) ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.